ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಗುಂಡ್ಲುಪೇಟೆ

# ಸಿ.ಸಿ. ಸಂಖ್ಯೆ: 753/2025

ಫ್ರಾಸಾ – 5

ಚಾಸಾ – **5**

**ಸಾಕ್ಷಿಯು ದಿಃ 04.11.2025 ರಂದು ನ್ಯಾಯಾಲಯದಲ್ಲಿ ಹಾಜರಿದ್ದು ಪ್ರಮಾಣ ವಚನ ಭೋಧಿಸಲಾಯಿತು.**

| | | |
|---|---|---|
| ಹೆಸರು | : | ಎಂ. ಮಹೇಶ್ |
| ತಂದೆಯ ಹೆಸರು | : | ಲೇ. ಮಾದಶೆಟ್ಟಿ |
| ವಯಸ್ಸು | : | 49 ವರ್ಷ |
| ವೃತ್ತಿ | : | ಹೆಚ್.ಸಿ. |
| ವಾಸಸ್ಥಳ | : | ಗುಂಡ್ಲುಪೇಟೆ |

**ಮುಖ್ಯ ವಿಚಾರಣೆ :ಮಾನ್ಯ ಎಪಿಪಿ ರವರಿಂದ :–**

ಜೂನ್ 2017 ರಿಂದ ಜುಲೈ 2023 ರವರೆಗೆ ಗುಂಡ್ಲುಪೇಟೆ ಪೊಲೀಸ್ ಠಾಣೆಯಲ್ಲಿ ಮುಖ್ಯ ಪೇದೆ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2. ದಿಃ 06.06.2021 ರಂದು ನಾನು ಠಾಣಾ ಪ್ರಭಾರದಲ್ಲಿದ್ದಾಗ ಸಂಜೆ 5.00 ಗಂಟೆ ಸಮಯದಲ್ಲಿ ಚಾಸಾ 1 ರವರು ಠಾಣೆಗೆ ಹಾಜರಾಗಿ ನೀಡಿದ ನಿಪಿ 1 ದೂರನ್ನು ಸ್ವೀಕರಿಸಿ ಠಾ.ಮೊ. ಸಂಖ್ಯೆ 121/2021 ರಂತೆ ಪ್ರಕರಣ ದಾಖಲಿಸಿ ಪ್ರ.ವ.ವ ತಯಾರಿಸಿ ಮಾನ್ಯ ನ್ಯಾಯಾಲಯಕ್ಕೆ ಮತ್ತು ಮೇಲಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ ಎಂದು ಸಾಕ್ಷಿಯು ನಿಪಿ 1 ದೂರಿನಲ್ಲಿ ತಮ್ಮ ಸಹಿ ನೋಡಿ ಗುರುತಿಸಿದ್ದು, ಅದನ್ನು ನಿಪಿ 1(ಬಿ) ಎಂದು ಗುರ್ತಿಸಲಾಯಿತು. ಪ್ರ.ವ.ವ ವನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ನಿಪಿ 3 ಎಂದು ಗುರ್ತಿಸಲಾಯಿತು.

3. ದಿಃ 11.06.2021 ರಂದು ಚಾಸಾ 4 ರವರೊಂದಿಗೆ ಕೃತ್ಯ ಸ್ಥಳ ಸ್ಥಳಕ್ಕೆ ಭೇಟಿ ನೀಡಿ ಚಾಸಾ 1 ತೋರಿಸಿದ ಸ್ಥಳದಲ್ಲಿ ನಿಪಿ 2 ರಂತೆ ಸ್ಥಳ ಮಹಜರ್ ಕ್ರಮ ಜರುಗಿಸಿ, ಸ್ಥಳದಲ್ಲಿ ಚಾಸಾ 1 ರವರು ಹಾಜರುಪಡಿಸಿದ ಮು.ಮಾ 1 ದೊಣ್ಣೆಯನ್ನು ಅಮಾನತ್ತು ಪಡಿಸಿಕೊಂಡಿರುತ್ತೇನೆ ಎಂದು ಸಾಕ್ಷಿ ನೋಡಿ ಗುರುತಿಸಿರುತ್ತಾರೆ. ಅದೇ ದಿನ ನಂತರ ಠಾಣೆಗೆ ಬಂದು ಮು.ಮಾ 1ನ್ನು ಠಾಣಾ ಮಾಲುಪಟ್ಟಿಯಲ್ಲಿ ಅಳವಡಿಸಿಕೊಂಡಿರುತ್ತೇನೆ. ಅದೇ ದಿನ ಚಾಸಾ 2 ಮತ್ತು 3 ರವರ ಹೇಳಿಕೆ ದಾಖಲಿಸಿಕೊಂಡಿರುತ್ತೇನೆ. ದಿಃ 18.06.2021 ರಂದು ಆರೋಪಿಗಳನ್ನು ಠಾಣೆಗೆ ಬರ ಮಾಡಿಕೊಂಡು ನ್ಯಾಯಾಲಯದಿಂದ ಸಮನ್ಸ್ ಬಂದ ನಂತರ ಹಾಜರಾಗುವಂತೆ ದಂಡ ಪ್ರಕ್ರೀಯಾ ಸಂಹಿತೆ 41 ಎ ಅಡಿಯಲ್ಲಿ ನೋಟೀಸ್ ನೀಡಿ ಬಿಟ್ಟಿರುತ್ತೇನೆ. ದಿಃ 19.06.2021 ರಂದು ಚಾಸಾ 1 ರವರು ಗಾಯದ ಪ್ರಮಾಣ ಪತ್ರವನ್ನು ಸ್ವೀಕರಿಸಿರುತ್ತೇನೆ ಎಂದು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ನಿಪಿ 4 ಎಂದು, ಸಾಕ್ಷಿಯ ಸಹಿಯನ್ನು ನಿಪಿ 4(ಎ) ಎಂದು ಗುರ್ತಿಸಲಾಯಿತು. ತನಿಖೆ ಪೂರ್ಣಗೊಂಡಿದ್ದು ಆರೋಪಿಗಳ ವಿರುದ್ಧ ಆರೋಪ ಸಾಬೀತಾದ ಮೇರೆಗೆ ದೋಷಾರೋಪಣಾ ಪಟ್ಟಿ ಸಲ್ಲಿಸಿರುತ್ತೇನೆ. ಆರೋಪಿಗಳನ್ನು ನೋಡಿದರೆ ಗುರುತಿಸುತ್ತೇನೆ. ಆರೋಪಿಗಳು ಗೈರು ಹಾಜರಿದ್ದು ಗುರ್ತಿಸುವಿಕೆಯ ವಿಚಾರದಲ್ಲಿ ತಕರಾರು ಇಲ್ಲ ಎಂದು ನುಡಿದ ಕಾರಣ ವಿನಾಯಿತಿ ಅರ್ಜಿಯನ್ನು ಪುರಸ್ಕರಿಸಲಾಯಿತು. ಸದರಿ ಗಾಯದ ಪ್ರಮಾಣ ಪತ್ರ ನೀಡಿದವರನ್ನು ಕಣ್ತಪ್ಪಿನಿಂದ ಸಾಕ್ಷಿದಾರರ ಪಟ್ಟಿಯಲ್ಲಿ ನಮೂದಿಸಿರುವುದಿಲ್ಲ ಮತ್ತು ಅವರನ್ನು ಈ ಪ್ರಕರಣದಲ್ಲಿ ವಿಚಾರಣೆ ಮಾಡಬೇಕಾಗಿ ಕೋರುತ್ತೇನೆ.

**ಪಾಟೀ ಸವಾಲು :– ಆರೋಪಿಗಳ ಪರ ವಕೀಲರಿಂದ**

ಚಾಸಾ 1 ರವರು ಯಾವುದೇ ದೂರು ನೀಡಿಲ್ಲ, ನಾನು ಘಟನಾ ಸ್ಥಳಕ್ಕೆ ಭೇಟಿ ನೀಡಿಲ್ಲ ಮತ್ತು ಪಂಚನಾಮೆ ಮಾಡಿಲ್ಲ ಎಂದರೆ ಸರಿಯಲ್ಲ. ಮುದ್ದೆ ಮಾಲು 1 ನ್ನು ಸ್ಥಳದಲ್ಲಿ ಅಮಾನತ್ತು ಪಡಿಸಿಕೊಂಡಿಲ್ಲ ಎಂದರೆ ಸರಿಯಲ್ಲ. ಯಾವುದೇ ಸಾಕ್ಷಿದಾರರ ಹೇಳಿಕೆ ದಾಖಲಿಸಿಲ್ಲ ಎಂದರೆ ಸರಿಯಲ್ಲ. ಗಾಯದ ಪ್ರಮಾಣ ಪತ್ರವನ್ನು ಈ ಕೇಸಿಗೋಸ್ಕರ

ಸೃಷ್ಟಿಸಿಕೊಳ್ಳಲಾಗಿದೆ ಎಂದರೆ ಸರಿಯಲ್ಲ. ಆರೋಪಿಗಳಿಗೂ ಈ ಪ್ರಕರಣಕ್ಕೂ ಯಾವುದೇ ಸಂಬಂಧ ಇಲ್ಲದಿದ್ದರೂ ಸಹ ಸುಳ್ಳು ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

(ಶ್ರೀ. ದೀಪು ಎಂ.ಟಿ.)
ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ,
ಗುಂಡ್ಲುಪೇಟೆ